**Bangalore**
**Regional News**
**08.09.2025 / 6.40p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<u>ಮುಖ್ಯಾಂಶಗಳು</u>**

೧. ಮದ್ದೂರು ಪ್ರಕರಣ: ೨೧ ಮಂದಿ ಬಂಧನ - ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ

೨. ಮದ್ದೂರು ಘಟನೆಗೆ ರಾಜ್ಯ ಸರ್ಕಾರವೇ ಹೊಣೆ - ಕೇಂದ್ರ ಸಚಿವ ಕುಮಾರ ಸ್ವಾಮಿ ಆರೋಪ

೩. ಮಳೆಹಾನಿ ಕುರಿತಂತೆ ೧೦ ದಿನದೊಳಗೆ ಸಮೀಕ್ಷೆ ನಡೆಸಿ ವರದಿ ನೀಡುವಂತೆ ಅಧಿಕಾರಿಗಳಿಗೆ ಸರ್ಕಾರ ಸೂಚನೆ

೪. ನಾಳೆ ೧೭ನೇ ಉಪರಾಷ್ಟ್ರಪತಿ ಹುದ್ದೆಗೆ ಚುನಾವಣೆ : ಸಿಪಿ ರಾಧಾಕೃಷ್ಣ ಹಾಗೂ ಸುದರ್ಶನ ರೆಡ್ಡಿ ಮಧ್ಯೆ ಸ್ಪರ್ಧೆ

೫. ಗ್ಯಾರಂಟಿ ಯೋಜನೆಗಳಿಗೆ ಸರ್ಕಾರದಿಂದ ೯೭ ಸಾವಿರದ ೮೧೩ ಕೋಟಿ ರೂಪಾಯಿ ಅನುದಾನ ವೆಚ್ಚ

><><><><><><

ಮಂಡ್ಯ ಜಿಲ್ಲೆಯ ಮದ್ದೂರು ಗಲಾಟೆ ಪ್ರಕರಣಕ್ಕೆ ಸಂಬಂಧಿಸಿದಂತೆ ೨೧ ಮಂದಿಯನ್ನು ಬಂಧಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವಂತೆ ಪೊಲೀಸರಿಗೆ ಸೂಚಿಸಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಎನ್ ಚೆಲುವರಾಯಸ್ವಾಮಿ ಮದ್ದೂರಿಗೆ ತೆರಳಿ ಪರಿಸ್ಥಿತಿ ಅವಲೋಕಿಸಿ ವರದಿ ನೀಡಲಿದ್ದಾರೆ. ಬಳಿಕ ಘಟನೆಗೆ ಸಂಬಂಧಿಸಿದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

><><><><><><

ಮಂಡ್ಯ ಜಿಲ್ಲೆಯ ಮದ್ದೂರು ಪಟ್ಟಣದಲ್ಲಿ ಪರಿಸ್ಥಿತಿ ನಿಯಂತ್ರಣದಲ್ಲಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಹೇಳಿದ್ದಾರೆ. ಜಿಲ್ಲೆಯಲ್ಲಿ ಶಾಂತಿ ಕಾಪಾಡುವಂತೆ ಅವರು ಮನವಿ ಮಾಡಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ನಾಳೆ ಬೆಳಗ್ಗಿನ ವರೆಗೆ ನಿಷೇದಾಜ್ಞೆ ಜಾರಿಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

><><><><><><

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಕೆಟ್ಟ ಆಡಳಿತ ಹಾಗೂ ನಡವಳಿಕೆಯಿಂದಲೇ ಮದ್ದೂರಿನಲ್ಲಿ ಇಂತಹ ಪರಿಸ್ಥಿತಿ ಸೃಷ್ಟಿಯಾಗಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಆರೋಪಿಸಿದ್ದಾರೆ.ಘಟನೆಯ ಕುರಿತಂತೆ ಮಂಡ್ಯ ಜಿಲ್ಲಾಧಿಕಾರಿ ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳ ಬಳಿ ಮಾಹಿತಿ ಪಡೆದುಕೊಂಡ ಬಳಿಕ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಶಾಂತಿ ನೆಮ್ಮದಿಗೆ ಹೆಸರಾಗಿದ್ದ ಮಂಡ್ಯ ಜಿಲ್ಲೆಯ ನೆಮ್ಮದಿ ಕೆಡಿಸುವ ಹುನ್ನಾರ ನಡೆಸಲಾಗುತ್ತಿದೆ ಎಂದು ದೂರಿದ್ದಾರೆ.ಜಿಲ್ಲೆಯಲ್ಲಿ ಶಾಂತಿ ನೆಲೆಸುವುದಕ್ಕೆ ಎಲ್ಲರೂ ಸಹಕಾರ ನೀಡಬೇಕು ಎಂದು ಮನವಿ ಮಾಡಿದ್ದಾರೆ.

ಧ್ವನಿ- ಕುಮಾರಸ್ವಾಮಿ, ಕೇಂದ್ರ ಸಚಿವ ( ಸೆಕೆಂಡುಗಳು)

><><><><><><

ರಾಜ್ಯದಲ್ಲಿ ಮಳೆ ಹಾನಿ ಕುರಿತಂತೆ ೧೦ ದಿನದೊಳಗೆ ಸಮೀಕ್ಷೆ ನಡಸಿ ವರದಿ ನೀಡುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದ್ದಾರೆ. ರಾಜ್ಯದಲ್ಲಿ ಅತಿವೃಷ್ಟಿಯಿಂದ ಉಂಟಾಗಿರುವ ಹಾನಿ ಹಾಗೂ ಪರಿಹಾರ ಕ್ರಮಗಳ ಕುರಿತು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆಸಿದ ವಿಡಿಯೋ ಸಂವಾದದಲ್ಲಿ ಮಾತನಾಡಿದ ಅವರು ಶೀಘ್ರ ಸಮೀಕ್ಷೆ ನಡೆಸಿ ವರದಿ ನೀಡಿದರೆ ಪರಿಹಾರವೂ ತ್ವರಿತವಾಗಿ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ - ಮುಖ್ಯಮಂತ್ರಿ ಸಿದ್ಧರಾಮಯ್ಯ

><><><><><><

ಉಪರಾಷ್ಟ್ರಪತಿ ಹುದ್ದೆಗೆ ನಾಳೆ ಚುನಾವಣೆ ನಡೆಯಲಿದೆ. ಎನ್‌ಡಿಎ ಅಭ್ಯರ್ಥಿಯಾಗಿ ಸಿ.ಪಿ.ರಾಧಾಕೃಷ್ಣನ್ ಹಾಗೂ ಪ್ರತಿಪಕ್ಷಗಳ ಒಕ್ಕೂಟ- ಐಎನ್‌ಡಿಐಎ ಅಭ್ಯರ್ಥಿಯಾಗಿ, ಬಿ.ಸುದರ್ಶನ ರೆಡ್ಡಿ ಸ್ಪರ್ಧಿಸಿದ್ದಾರೆ. ಬೆಳಗ್ಗೆ ೧೦ ಗಂಟೆಯಿಂದ ಸಂಜೆ ೫ರ ವರೆಗೆ ಉಭಯ ಸದನಗಳ ಸದಸ್ಯರಿಂದ ಮತದಾನ ನಡೆಯಲಿದೆ. ಬಳಿಕ ಮತ ಎಣಿಕೆ ಕಾರ್ಯ ನಡೆಯಲಿದೆ. ಪ್ರಸ್ತುತ ಸಂಸತ್ತಿನ ಉಭಯ ಸದನಗಳ ಸದಸ್ಯರ ಒಟ್ಟು ಸಂಖ್ಯೆ ೭೮೧ ಇದ್ದು. ಈ ಪೈಕಿ ಆಡಳಿತಾರೂಢ ಎನ್‌ಡಿಎ ಮೈತ್ರಿಕೂಟದಲ್ಲಿ, ೪೩೯ ಸಂಸದರಿದ್ದರೆ, ಪ್ರತಿಪಕ್ಷಗಳ ಒಕ್ಕೂಟದಲ್ಲಿ ೩೨೪ ಸದಸ್ಯರಿದ್ದಾರೆ. ಇತರೆ ಪಕ್ಷಗಳ ಸದಸ್ಯರ ಸಂಖ್ಯೆ ೧೮ ಇದೆ.

><><><><><><><

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಇಂದು ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಪಂಚ ಗ್ಯಾರಂಟಿ ಯೋಜನೆಯಡಿ ಇದುವರೆಗೆ ೯೭ ಸಾವಿರದ ೮೧೩ ಕೋಟಿ ರೂಪಾಯಿ ಅನುದಾನವನ್ನು ವೆಚ್ಚ ಮಾಡಲಾಗಿದೆ ಎಂದು ಮಾಹಿತಿ ನೀಡಲಾಯಿತು. ಸಭೆಯಲ್ಲಿ ಜಿಎಸ್ಟಿ ಪಾವತಿಸುವವರು ಗೃಹಲಕ್ಷ್ಮಿ ಯೋಜನೆ ಲಾಭ ಪಡೆಯುವ ಕುರಿತು ಇರುವ ಗೊಂದಲವನ್ನು ನಿವಾರಿಸಲು ಕ್ರಮಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ಅನರ್ಹ ಬಿಪಿಎಲ್ ಕಾರ್ಡುದಾರರನ್ನು ಗುರುತಿಸಿ ಬಿಪಿಎಲ್ ಕಾರ್ಡ್ ರದ್ದುಪಡಿಸುವ ಕಾರ್ಯವನ್ನು ಪಂಚಾಯತ್ ಮಟ್ಟದಲ್ಲಿ ನಡೆಸಬೇಕು. ಈ ಕುರಿತಾಗಿರುವ ಮಾನದಂಡಗಳನ್ನು ಕಟ್ಟುನಿಟ್ಟಿನಿಂದ ಜಾರಿಗೊಳಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ. ಅನ್ನಭಾಗ್ಯ ಅಕ್ಕಿ ಕಾಳಸಂತೆಯಲ್ಲಿ ಮಾರಾಟ ಮಾಡುವುದನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಅಕ್ಕಿಯ ಬದಲು ಪ್ರದೇಶವಾರು ಇತರ ಧಾನ್ಯಗಳನ್ನು ನೀಡುವ ಬಗ್ಗೆ ಪರಿಶೀಲನೆ ನಡೆಸುವಂತೆ ತಿಳಿಸಿದ್ದಾರೆ. ಗ್ಯಾರಂಟಿ ಯೋಜನೆಗಳ ಲಾಭ ಅರ್ಹ ಫಲಾನುಭವಿಗಳಿಗೆ ತಲುಪಿಸಲು ಆಂದೋಲನ ಮಾದರಿಯಲ್ಲಿ ಕಾರ್ಯ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದ್ದಾರೆ.

><><><><><><><

ರಾಜ್ಯ ಸರ್ಕಾರದ ಐಟಿ ಮತ್ತು ಬಿಟಿ ಇಲಾಖೆ ಮತ್ತು ಉನ್ನತ ಶಿಕ್ಷಣ ಇಲಾಖೆಯು ಬ್ಯಾಂಕಿಂಗ್ ಹಣಕಾಸು ಸೇವೆಗಳು ಮತ್ತು ವಿಮೆ ಒಕ್ಕೂಟದೊಂದಿಗೆ ಪಾಲುದಾರಿಕೆ ಹೊಂದಿದೆ. ರಾಜ್ಯಾದ್ಯಂತ ಪದವಿಪೂರ್ವ ಸಂಸ್ಥೆಗಳಲ್ಲಿ ಉದ್ಯಮ-ಪರಿಶೀಲಿಸಲಾದ ಪಠ್ಯಕ್ರಮ ಪರಿಚಯಿಸುವ ಮೂಲಕ ಶಿಕ್ಷಣದಿಂದ ಉದ್ಯೋಗಕ್ಕೆ ಅರ್ಹರಾಗುವ ಅಂತರವನ್ನು ಕಡಿಮೆ ಮಾಡುವ ಗುರಿಯನ್ನು ಈ ಉಪಕ್ರಮ ಹೊಂದಿದೆ. ಈ

ಕಾರ್ಯಕ್ರಮದ ಮೂಲಕ, ವಿದ್ಯಾರ್ಥಿಗಳು ಪ್ರಮುಖ ಬ್ಯಾಂಕುಗಳು, ವಿಮಾದಾರರು ಮತ್ತು ಫಿನ್‌ಟೆಕ್ ಕಂಪನಿಗಳೊಂದಿಗೆ ಅನುಭವಿ ಯೋಜನೆಗಳು ಮತ್ತು ಇಂಟರ್ನ್ ಶಿಪ್ ಗಳಿಂದ ಪೂರಕವಾದ ಡೊಮೇನ್ ಹಾಗೂ ತಾಂತ್ರಿಕ ತರಬೇತಿಯನ್ನು ಪಡೆಯಲಿದ್ದಾರೆ.

><><><><><><

ವಿದ್ಯಾರ್ಥಿಗಳು ವಿದ್ಯೆಯ ಜೊತೆಗೆ ಕ್ರೀಡಾಕೂಟಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಮೂಲಕ ಜಿಲ್ಲೆಯ ಕೀರ್ತಿ ಹೆಚ್ಚಿಸುವಂತೆ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ.ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಸರ್ಕಾರ ನೀಡಿದ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಂಡು ರಾಜ್ಯ ಮತ್ತು ರಾಷ್ಟ್ರ ಮಟ್ಟದ ಕ್ರೀಡೆಗಳಲ್ಲಿ ಭಾಗವಹಿಸುವಂತೆ ಕರೆ ನೀಡಿದ್ದಾರೆ.

><><><><><><

ಬೆಂಗಳೂರು ನಗರ ವಿಶ್ವ ವಿದ್ಯಾನಿಲಯದ ನೂತನ ಕುಲಪತಿಗಳಾಗಿ ಪ್ರಸ್ತುತ ಮೌಲ್ಯಮಾಪನ ಕುಲಸಚಿವ ಪ್ರೊಫೆಸರ್ ರಮೇಶ್ ಬಿ ಅಧಿಕಾರ ವಹಿಸಿಕೊಂಡಿದ್ದಾರೆ. ಪ್ರಭಾರ ಕುಲಪತಿಗಳಾದ ಪ್ರೊಫೆಸರ್ ಕೆ. ಆರ್. ಜಲಜ ಅಧಿಕಾರ ಹಸ್ತಾಂತರಿಸಿದರು. ತುಮಕೂರು ವಿಶ್ವ ವಿದ್ಯಾನಿಲಯದ ಸ್ನಾತಕೋತ್ತರ ಸಮಾಜ ಕಾರ್ಯ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಹಿರಿಯ ಪ್ರಾಧ್ಯಾಪಕರಾದ , ರಮೇಶ್ ಬಿ. ಬೆಂಗಳೂರು ನಗರ ವಿಶ್ವ ವಿದ್ಯಾನಿಲಯದ ಮೌಲ್ಯಮಾಪನ ಕುಲಸಚಿವರಾಗಿ ಎರಡನೇ ಅವಧಿಗೆ ಸೇವೆ ಸಲ್ಲಿಸುತ್ತಿದ್ದರು.ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾನಿಲಯದ ಕುಲಸಚಿವರಾಗಿ ಅವರು ಕಾರ್ಯ ನಿರ್ವಹಿಸಿದ್ದರು.

><><><><><><

ಮಂಗಳೂರು  ಸಾಕ್ಷರತಾ ದಕ್ಷಿಣ ಕನ್ನಡ ಜಿಲ್ಲೆ ಸಂಪೂರ್ಣ ಸಾಕ್ಷರತಾ ಜಿಲ್ಲೆಯಾಗಿ ಘೋಷಣೆಯಾಗುವ ನಿಟ್ಟಿನಲ್ಲಿ ಅಧಿಕಾರಿಗಳು ಮುತುವರ್ಜಿಯಿಂದ ಕಾರ್ಯ ನಿರ್ವಹಿಸಬೇಕು ಎಂದು ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸದಾಶಿವ ಉಳ್ಳಾಲ್  ತಿಳಿಸಿದ್ದಾರೆ.ಮಂಗಳೂರಿನಲ್ಲಿಂದು ನಡೆದ ಅಂತಾರಾಷ್ಟ್ರೀಯ ಸಾಕ್ಷರತಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಸಾಕ್ಷರತಾ ಅಭಿಯಾನದಿಂದಾಗಿ ೭೫ರ ಹರೆಯದ ವ್ಯಕ್ತಿಯೂ ಅಕ್ಷರಾಭ್ಯಾಸ ಕಲಿತು ವೇದಿಕೆಯಲ್ಲಿ ನಿಂತು ಮಾತನಾಡುವ ಧೈರ್ಯ ಹೊಂದುವಂತಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯ ಈ ಸಾಕ್ಷರತಾ ಅಭಿಯಾನ ಮಹತ್ವದ ಬದಲಾವಣೆಗೆ ಕಾರಣವಾಗಿದೆ  ಎಂದು ಹೇಳಿದ್ದಾರೆ.

><><><**END**<><><><